**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರಾಣೇಶ್ ಎಂ.ಕೆ. ಇವರು ನಿಯಮ 330 ರಡಿ ಮಂಡಿಸಿರುವ ಸೂಚನಾ ಪತ್ರಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.**

**ವಿಷಯ: ಕರ್ನಾಟಕ ಪಂಚಾಯತ್ ರಾಜ್ ಆಡಳಿತಾತ್ಮಕ ಸೇವೆಗಳನ್ನು ಜಾರಿಗೊಳಿಸುವ ವಿಚಾರವಾಗಿ ಮತ್ತು ಪಂಚಾಯತ್ ರಾಜ್ ಸೇವೆಗಳಿಗಾಗಿ ಆಯುಕ್ತಾಲಯ ಸ್ಥಾಪನೆ ಬಗ್ಗೆ.**

**ಉತ್ತರ:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 232-ಬಿ ರಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದಂತೆ ಕರ್ನಾಟಕ ಪಂಚಾಯತ್ ರಾಜ್ ಆಡಳಿತಾತ್ಮಕ ಸೇವೆಯ ಸ್ಥಾಪನೆ ಮಾಡಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ, ಜಿಲ್ಲಾ ಪಂಚಾಯತಿ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯದ ನಿರ್ದೇಶಕರು (ಪಂ.ರಾಜ್) ಹುದ್ದೆಯನ್ನೊಳಗೊಂಡಂತೆ ಕರ್ನಾಟಕ ಪಂಚಾಯತ್ ರಾಜ್ ಆಡಳಿತಾತ್ಮಕ ಸೇವೆಯ ಸ್ಥಾಪನೆ ಮಾಡಲಾಗುವುದು.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ, 1993 ರ ಪ್ರಕರಣ 232-ಎ ರಲ್ಲಿ ರಾಜ್ಯದಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳ ಆಡಳಿತ ನಿರ್ವಹಣೆಗಾಗಿ ಪ್ರತ್ಯೇಕವಾಗಿ ಪಂಚಾಯತ್ ರಾಜ್ ಆಯುಕ್ತಾಲಯ ಸ್ಥಾಪಿಸಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ ಆಯುಕ್ತಾಲಯದ ಅಧಿಕಾರಗಳು, ಅಧಿಕಾರಿ ಮತ್ತು ಸಿಬ್ಬಂದಿ ಸ್ವರೂಪ ನಿರ್ದಿಷ್ಟಪಡಿಸಿ ಈ ಸಂಬಂಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಮತ್ತು ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿತ್ತು. ಪ್ರಸ್ತುತ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಸಹಮತಿ ನೀಡಿದ್ದು, ಆರ್ಥಿಕ ಇಲಾಖೆಯ ಸಹಮತಿ ದೊರೆತ ನಂತರ ಪಂಚಾಯತ್ ರಾಜ್ ಆಯುಕ್ತಾಲಯ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು.

**(ಕೆ.ಎಸ್. ಈಶ್ವರಪ್ಪ)**
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಸಂಖ್ಯೆ. ಗ್ರಾಅಪ 239 ಗ್ರಾಪಂಅ 2020.